# ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ-3:ಎ3:ಸ್ವಾಯತ್ತತೆ:IFIM:2020-2021

ಜ್ಞಾನಭಾರತಿ
ಬೆಂಗಳೂರು-56
ದಿನಾಂಕ:02-07-2021

## ಅಧಿಸೂಚನೆ

**ವಿಷಯ: 2020-21ನೇ** ಸಾಲಿನಿಂದ ಬೆಂಗಳೂರಿನ ಐ.ಎಫ್.ಐ.ಎಂ. ಕಾಲೇಜಿಗೆ ಸ್ವಾಯತ್ತತೆಯನ್ನು ನೀಡುವ ಬಗ್ಗೆ.

**ಉಲ್ಲೇಖ : 1.** ಸರ್ಕಾರದ ಪತ್ರದ ಸಂಖ್ಯೆ:ಇಡಿ:61:ಯು.ಬಿ.ವಿ.:2020 ದಿನಾಂಕ:03-03-2021

**2.** ಜಂಟಿ ನಿರ್ದೇಶಕರು, ವಿಶ್ವವಿದ್ಯಾಲಯ ಅನುದಾನ ಆಯೋಗ, ನವದೆಹಲಿ, ಇವರ ಪತ್ರ ಸಂಖ್ಯೆ:No.F.22-1/2017(AC) ದಿನಾಂಕ: 22-12-2020.

**3.** ವಿ.ವಿ. ಪತ್ರ ದಿನಾಂಕ: 02-06-2021.

**4.** ಕಾಲೇಜಿನ ಪ್ರಾಂಶುಪಾಲರ ಪತ್ರ ದಿನಾಂಕ:17-6-2021.

**5.** ಕುಲಪತಿಯವರ ಅನುಮೋದನೆ ದಿನಾಂಕ:25-06-2021.

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 64ನೇ ಪ್ರಕರಣದ (1)ನೇ ಉಪಪ್ರಕರಣದ ಅಡಿಯಲ್ಲಿ ಮತ್ತು ಬೆಂಗಳೂರು ವಿಶ್ವವಿದ್ಯಾಲಯದ ಸ್ವಾಯತ್ತತಾ ಕಾಲೇಜು/ಸಂಸ್ಥೆ ಪರಿನಿಯಮಾವಳಿ-2005 ಪ್ರಕರಣ 4.8ರಡಿಯಲ್ಲಿ ಹಾಗೂ ಸರ್ಕಾರದ ಉಲ್ಲೇಖ(1)ರ ಪತ್ರದಲ್ಲಿನ ನಿರ್ದೇಶನದಂತೆ, ಬೆಂಗಳೂರು ವಿಶ್ವವಿದ್ಯಾಲಯವು **'ಐ.ಎಫ್.ಐ.ಎಂ. ಕಾಲೇಜು, ನಂ.8ಪಿ, 9ಪಿ, ಕೆ.ಐ.ಎ.ಡಿ.ಬಿ.ಐ. ಇಂಡಸ್ಟ್ರಿಯಲ್ ಏರಿಯಾ, ಎಲೆಕ್ಟ್ರಾನಿಕ್ ಸಿಟಿ 1ನೇ ಫೇಸ್, ಬೆಂಗಳೂರು-560 100'** ಈ ಕಾಲೇಜು ನಡೆಸುತ್ತಿರುವ ಈ ಕೆಳಗೆ ನಮೂದಿಸಿರುವ ಕೋರ್ಸುಗಳಿಗೆ ಕೆಳಕಂಡ ಷರತ್ತಿಗೊಳಪಟ್ಟು, ಶೈಕ್ಷಣಿಕ ಸ್ವಾಯತ್ತತೆಯನ್ನು ಯು.ಜಿ.ಸಿ.ಯು ನಿಗಧಿಪಡಿಸಿರುವಂತೆ **2020-21**ನೇ ಶೈಕ್ಷಣಿಕ ಸಾಲಿನಿಂದ **2029-30**ನೇ ಶೈಕ್ಷಣಿಕ ಸಾಲಿನವರೆಗೆ ಹತ್ತು(10) ವರ್ಷಗಳ ಅವಧಿಗೆ ಮಂಜೂರು ಮಾಡಲಾಗಿದೆ.

| ಕೋರ್ಸು | ವಿಷಯ ಸಮೂಹ | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಕಾಂ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 100 (ನೂರು) |
| ಬಿ.ಬಿ.ಎ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 180 (ನೂರ ಎಂಭತ್ತು) |
| ಬಿ.ಸಿ.ಎ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 60 (ಅರವತ್ತು) |
| ಬಿ.ಎ. | ಪತ್ರಿಕೋದ್ಯಮ, ಮನಃಶಾಸ್ತ್ರ, ಇಂಗ್ಲೀಷ್ | 40 (ನಲವತ್ತು) |
| ಎಂ.ಕಾಂ. | ವಿ.ವಿ. ಪರಿನಿಯಮಾವಳಿಯಂತೆ | 40 (ನಲವತ್ತು) |
| ಎಂ.ಬಿ.ಎ. | ವಿ.ವಿ. ಪರಿನಿಯಮಾವಳಿಯಂತೆ | 120 (ನೂರ ಇಪ್ಪತ್ತು) |

**ಷರತ್ತುಗಳು:**

1. **ಕಾಲೇಜು ತಪ್ಪದೇ ನ್ಯಾಕ್ ಮೌರುಮೌಲ್ಯಮಾಪನಕ್ಕೆ ಒಳಗಾಗಿ ನ್ಯಾಕ್ ಪ್ರಮಾಣ ಪತ್ರವನ್ನು ಪಡೆಯತಕ್ಕದು ಹಾಗೂ 'ಎ' ದರ್ಜೆಯನ್ನು ಕಾಯ್ದುಕೊಳ್ಳತಕ್ಕದ್ದು.**
2. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಮೇಲ್ಕಂಡ ಕಾಲೇಜಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರುಮಾಡುವುದಿಲ್ಲ; ಅದು ಶಾಶ್ವತ ಅನುದಾನ ರಹಿತ ಕಾಲೇಜೆಂದು ಪರಿಗಣಿಸತಕ್ಕದ್ದು.
3. ಈ ಸ್ವಾಯತ್ತತೆಯು ಶೈಕ್ಷಣಿಕ ಸ್ವಾಯತ್ತತೆಯು ಮಾತ್ರ ಆಗಿರುತ್ತದೆ.
4. ಈ ಸ್ವಾಯತ್ತತೆಯು ಮಂಜೂರು ಮಾಡಲ್ಪಟ್ಟಿರುವ ಕೋರ್ಸುಗಳಿಗೆ ಮಾತ್ರ ಅನ್ವಯಿಸುತ್ತದೆ.

5. ಕಾಲೇಜು ರಾಜ್ಯ ಸರ್ಕಾರವು ಜಾರಿಗೊಳಿಸಿರುವ ಮೀಸಲಾತಿ ನಿಯಮಗಳನ್ನು ವಿದ್ಯಾರ್ಥಿಗಳ ಪ್ರವೇಶದಲ್ಲಿ ಮತ್ತು ಸಿಬ್ಬಂಧಿಗಳ ನೇಮಕಾತಿಗಳಲ್ಲಿ ತಪ್ಪದೇ ಅನುಸರಿಸತಕ್ಕದ್ದು.

6. ಎಂ.ಬಿ.ಎ ಕೋರ್ಸಿಗೆ ಎ.ಐ.ಸಿ.ಟಿ.ಇ. ವಿಸ್ತರಣಾ ಅನುಮೋದನೆಯನ್ನು ಕಡ್ಡಾಯವಾಗಿ ಪಡೆಯತಕ್ಕದ್ದು.

7. ಕಾಲೇಜು ಕಾಲ ಕಾಲಕ್ಕೆ ವಿಶ್ವವಿದ್ಯಾಲಯಕ್ಕೆ ಸಲ್ಲಿಸಬೇಕಾದ, ವಾರ್ಷಿಕ ಶುಲ್ಕ, ನೊಂದಣಿ ಶುಲ್ಕ, ಎನ್.ಎಸ್.ಎಸ್. ಶುಲ್ಕ, ಅರ್ಹತಾ ಶುಲ್ಕ ಮತ್ತು ಇತರೇ ಅನ್ವಯವಾಗುವ ಶುಲ್ಕಗಳನ್ನು ವಿಶ್ವವಿದ್ಯಾಲಯಕ್ಕೆ ತಪ್ಪದೇ ಸಂದಾಯ ಮಾಡತಕ್ಕದ್ದು.

8. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಸ್ವಾಯತ್ತತಾ ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

9. ಕಾಲೇಜು ಸ್ವಾಯತ್ತತಾ ಪರಿನಿಯಮಾವಳಿಯಲ್ಲಿ ಸೂಚಿಸಿರುವಂತೆ ಕಾಲ ಕಾಲಕ್ಕೆ ಅನ್ವಯವಾಗುವ ವರದಿಗಳನ್ನು ಕಾಲೇಜು ತಪ್ಪದೇ ವಿಶ್ವವಿದ್ಯಾಲಯಕ್ಕೆ ಸಲ್ಲಿಸತಕ್ಕದ್ದು.

10. ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.

11. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಭೋಧಕರು ಹಾಗೂ ಭೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತ್ತಕ್ಕದ್ದು. ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರಿ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಂಡಲ್ಲಿ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

12. ಕಾಲೇಜು, ಕೋರ್ಸುಗಳ ಶಿಕ್ಷಣ ಕ್ರಮವನ್ನು, ವಿದ್ಯಾರ್ಥಿಗಳ ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು, ಸೇವೆಯಲ್ಲಿರುವ ಭೋಧಕರುಗಳನ್ನು ಪ್ರಾಂಶುಪಾಲರು/ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

13. ಕಾಲೇಜು/ಆಡಳಿತ ಮಂಡಳಿ ಶೇ.50ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗಧಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗಧಿಪಡಿಸುವ ಶುಲ್ಕವನ್ನು ಮಾತ್ರ ವಸೂಲುಮಾಡತಕ್ಕದ್ದು. ವಿಶ್ವವಿದ್ಯಾಲಯವು ನಿಗಧಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.

14. ವೈಶಾಕ V/S ರಾಜಸ್ಥಾನದ ರಾಜ್ಯ ಸರ್ಕಾರದ ಮೊಕದ್ದಮೆಗೆ ಸಂಬಂಧಿಸಿದಂತೆ, ದಿನಾಂಕ:13-8-1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿ/ವಿದ್ಯಾರ್ಥಿ, ಗಲಭೆಯನ್ನು ಉಂಟುಮಾಡುವುದಾಗಲೀ ಅಥವಾ ಯಾವುದೇ ವ್ಯಕ್ತಿಯಿಂದ(ಬೋಧಕ/ ಬೋಧಕೇತರ/ ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕಳ, ಲೈಂಗಿಕ ಕಿರುಕಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚುಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾದಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು, ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು.

15. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ, ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ಅವರಿಗೆ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

16. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ

ಪೂರ್ಣವಾಗದ ಅವಧಿಯ ಭೋದನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

17. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

*18. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.*

19. ಸ್ಥಾಯಿ ಸಮಿತಿಯು ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಹಾಗೂ ಇವುಗಳನ್ನು ಪಾಲಿಸಿದ ಬಗ್ಗೆ ವರದಿಯನ್ನು ವಿಶ್ವವಿದ್ಯಾಲಯಕ್ಕೆ 15 ದಿನಗಳ ಒಳಗಾಗಿ ಕಳುಹಿಸತಕ್ಕದ್ದು.

20. ಈ ಅಧಿಸೂಚನೆಯೊಂದಿಗೆ ಲಗತ್ತಿಸಿರುವ ಮುಚ್ಚಳಿಕೆ ಪತ್ರದ ಮಾದರಿಯನ್ನು ರೂ.200/-ಗಳ ಚಾಪಾಕಾಗದದಲ್ಲಿ ಬೆರಳಚ್ಚು ಮಾಡಿ, ಕಾಲೇಜಿನ ಅಧ್ಯಕ್ಷರು/ಪ್ರಾಂಶುಪಾಲರಿಂದ ಸಹಿ ಮಾಡಿಸಿ, ವಿಶ್ವವಿದ್ಯಾಲಯಕ್ಕೆ 15 ದಿನಗಳ ಒಳಗಾಗಿ ಸಲ್ಲಿಸತಕ್ಕದ್ದು.

ಆಜ್ಞೆ ಮೇರೆಗೆ

K. Jyothi 3/7/2021

ಕುಲಸಚಿವರು

ಗೆ,

**1. ಅಧ್ಯಕ್ಷರು/ಕಾರ್ಯದರ್ಶಿ,**
**ಸೆಂಟರ್ ಫಾರ್ ಡೆವೆಲಪ್‌ಮೆಂಟ್ ಎಜುಕೇಷನ್,**
**ನಂ.8ಪಿ, 9ಪಿ, ಕೆ.ಐ.ಎ.ಡಿ.ಬಿ.ಐ. ಇಂಡಸ್ಟ್ರಿಯಲ್ ಏರಿಯಾ,**
**ಎಲೆಕ್ಟ್ರಾನಿಕ್ ಸಿಟಿ 1ನೇ ಫೇಸ್, ಬೆಂಗಳೂರು-560 100**

**2. ಪ್ರಾಂಶುಪಾಲರು,**
**ಐ.ಎಫ್.ಐ.ಎಂ. ಕಾಲೇಜು,**
**ನಂ.8ಪಿ, 9ಪಿ, ಕೆ.ಐ.ಎ.ಡಿ.ಬಿ.ಐ. ಇಂಡಸ್ಟ್ರಿಯಲ್ ಏರಿಯಾ,**
**ಎಲೆಕ್ಟ್ರಾನಿಕ್ ಸಿಟಿ 1ನೇ ಫೇಸ್, ಬೆಂಗಳೂರು-560 100**

<u>ಪ್ರತಿಗಳು</u>:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ), ಡಾ|| ಅಂಬೇಡ್ಕರ್ ವೀಧಿ, ಬೆಂಗಳೂರು-1
2. ಅಧ್ಯಕ್ಷರು/ಕಾರ್ಯದರ್ಶಿಯವರು, ವಿಶ್ವವಿದ್ಯಾಲಯ ಧನ ಸಹಾಯ ಆಯೋಗ, ಬಹದ್ದೂರು ಷಾ ಜ಼ಾಫ಼ರ್ ಮಾರ್ಗ, ನವದೆಹಲಿ-110 002
3. ಪ್ರಾದೇಶಿಕ ನಿರ್ದೇಶಕರು, ವಿಶ್ವವಿದ್ಯಾಲಯ ಧನ ಸಹಾಯ ಆಯೋಗ, ಪಿ.ಕೆ. ಬ್ಲಾಕ್, ಅರಮನೆ ರಸ್ತೆ, ಬೆಂಗಳೂರು-009.
4. ಕಾರ್ಯದರ್ಶಿಯವರು, ಎ.ಐ.ಸಿ.ಟಿ.ಇ., ಇಂದಿರಾಗಾಂಧಿ ಸ್ಪೋರ್ಟ್ಸ್ ಕಾಂಪ್ಲೆಕ್ಸ್, ಐ.ಪಿ.ಎಸ್ಟೇಟ್, ನವದೆಹಲಿ-110002
5. ನಿರ್ದೇಶಕರು, ಶಿಕ್ಷಣ ಆಯುಕ್ತರು, ಬೆಂಗಳೂರು-1.
6. ಕುಲಸಚಿವರು (ಮೌಲ್ಯಮಾಪನ), ಬೆಂ. ವಿ., ಬೆಂಗಳೂರು-56,
7. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-01.
8. ನಿರ್ದೇಶಕರು, ಪಿ.ಎಂ.ಇ.ಬಿ., ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-56
9. ಉಪ ಕುಲಸಚಿವರು : ಅಧೀಕ್ಷಕರು ಶೈಕ್ಷಣಿಕ ವಿಭಾಗ-1/2/4. ಬೆಂ. ವಿ. ಬೆಂಗಳೂರು-56.

***